ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಪಟ್ಟಿ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ನಕ್ಸಲ್ ಚಟುವಟಿಕೆ ಕುರಿತು

ಶ್ರೀ ಪ್ರಾಣೇಶ್. ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

74 (424) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ನಕ್ಸಲ್ ಚಟುವಟಿಕೆಗಳ ನಿಯಂತ್ರಣದ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಎಷ್ಟು ಜಿಲ್ಲೆಗಳನ್ನು ನಕ್ಸಲ್ ಪ್ರದೇಶವೆಂದು ಘೋಷಣೆ ಮಾಡಲಾಗಿದೆ ;

(ಆ) ರಾಜ್ಯದಲ್ಲಿ ನಕ್ಸಲ್ ಚಟುವಟಿಕೆಯಲ್ಲಿ ಪ್ರಸ್ತುತ ಎಷ್ಟು ಜನ ಭಾಗಿಯಾಗಿದ್ದಾರೆ; ಮಾಹಿತಿ ಸರ್ಕಾರಕ್ಕೆ ಇದೆಯೇ ; (ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ನಕ್ಸಲ್ ಪೀಡಿತ ಪ್ರದೇಶಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಯಾವ ಯಾವ ಕಾರ್ಯಗಳಿಗೆ ಬಳಸಲಾಗಿದೆ ; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಿಂದ ಶರಣಾಗತಿ ಪ್ರಕ್ರಿಯೆಯಲ್ಲಿ ಎಷ್ಟು ಜನರನ್ನು ಹಾಗೂ ಯಾರನ್ನು ಮುಖ್ಯವಾಹಿನಿಗೆ ತರಲಾಗಿದೆ ; ಅವರಿಗೆ ಯಾವ ಸವಲತ್ತುಗಳನ್ನು ನೀಡಲಾಗಿದೆ ; ಇನ್ನು ಎಷ್ಟು ಜನರನ್ನು ಕರೆತರುವ ಪ್ರಕ್ರಿಯೆ ಸರ್ಕಾರ ಮುಂದಿದೆಯೇ ; (ವಿವರ ನೀಡುವುದು)

(ಉ) ನಕ್ಸಲ್ ಕಾರ್ಯಾಚರಣೆ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು ?